ಅ) ಬೆಂಗಳೂರು ನಗರದಲ್ಲಿ ಈಗಾಗಲೇ ಹಲವಾರು ಸರ್ಕಾರಿ ನೌಕರರುಗಳು ಸರ್ಕಾರಿ ವಸತಿಗೃಹಗಳು ಇಲ್ಲದೆ ತೊಂದರೆ ಅನುಭವಿಸುತ್ತಿರುವುದರಿಂದ ಕಾಲಿ ಬೆಂಗಳೂರಿನಲ್ಲಿ ಇರುವ ಯಾವುದೇ ಸರ್ಕಾರಿ ವಸತಿಗೃಹಗಳನ್ನು ಮಾರಾಟ ಮಾಡುವ ಯಾವುದೇ ಪ್ರಸ್ತಾವನೆಯನ್ನು ಸರ್ಕಾರವು ಪರಿಗಣಿಸಿರುವುದಿಲ್ಲ.

ಆ) (ಅ) ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಬೆಂಗಳೂರು ನಗರದಲ್ಲಿ ಸರ್ಕಾರಿ ಸಿಬ್ಬಂದಿಗೆ ವಸತಿಗೃಹಗಳ ಅಗಾಧ ಕೊರತೆ ಇರುವುದರಿಂದ ಸ್ವಾಯತ್ತ ಸಂಸ್ಥೆಗಳು ತೆಗೆದುಕೊಂಡಿರುವ ಕ್ರಮಗಳನ್ನು ಲೋಕೋಪಯೋಗಿ ಇಲಾಖೆಯ ಗಣನೆಗೆ ತೆಗೆದುಕೊಂಡಿಲ್ಲ.

ಈ) (ಇ) ಉತ್ತರದ ಹಿನ್ನೆಲೆಯಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಉ) ಲೋಕೋಪಯೋಗಿ ಇಲಾಖೆಯ ವ್ಯಾಪ್ತಿಯಲ್ಲಿರುವ ಸರ್ಕಾರದ ವಸತಿಗೃಹಗಳನ್ನು ಮಾರಾಟ ಮಾಡುವುದಿಲ್ಲ ಎಂಬ ನಿಲುವನ್ನು ಸರ್ಕಾರವು ತೆಗೆದುಕೊಂಡಿದೆ.

ಆಳ ಸಮುದ್ರದಲ್ಲಿ ವಿದೇಶಿ ಹಡಗುಗಳಲ್ಲಿ ಮೀನುಗಾರಿಕೆ.

660 - ಶ್ರೀ ವಿಶ್ವೇಶ್ವರ ಹೆಗ್ಗಡೆ (ಅಂಕೋಲಾ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಸಮುದ್ರದಲ್ಲಿ ವಿದೇಶಿ ಹಡಗುಗಳು ಆಳ ಸಮುದ್ರದಲ್ಲಿಯೂ ಮೀನುಗಾರಿಕೆ ತೊಡಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ ಈ ಬಗ್ಗೆ ಸರ್ಕಾರದ ಸ್ಪಷ್ಟ ನಿರ್ಧಾರವೇನು ?

ಶ್ರೀ ಕೆ. ಜಯಪ್ರಕಾಶ ಹೆಗ್ಡೆ (ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು) :

ಅ) 12(22 ಕಿ.ಮೀ.) ನಾಮಿಕ ಮೈಲು ಒಳಗಿನ ಪ್ರದೇಶದ ಮೀನುಗಾರಿಕೆ ವಿಷಯ ರಾಜ್ಯ ಸರ್ಕಾರಕ್ಕೆ ಸಂಬಂಧಿಸಿರುತ್ತವೆ. 12 ನಾಮಿಕ ಮೈಲಿನ ನಂತರದ ಸಮುದ್ರ ಪ್ರದೇಶದ ಮೀನುಗಾರಿಕಾ ಕಾರ್ಯವ್ಯಾಪ್ತಿ ಕೇಂದ್ರದ ಸ್ವಾಧೀನಕ್ಕೆ ಬರುತ್ತದೆ. ಆಳ ಸಮುದ್ರ ಮೀನುಗಾರಿಕೆ ಅವಕಾಶವನ್ನು ರಾಜ್ಯದ ಕರಾವಳಿ ಮೀನುಗಾರರಿಗೆ ಮೀಸಲಿಡಬೇಕೆಂದು ಕೇಂದ್ರ ಸರ್ಕಾರಕ್ಕೆ ರಾಜ್ಯ ಸರ್ಕಾರ ಒತ್ತಾಯ ತಂದಿದೆ.

ಬೇಲೆಕೇರಿ ಬಂದರಿನ ಹೂಳೆತ್ತುವ ಕೆಲಸ.

661 - ಶ್ರೀ ಕೆ. ವಿಶ್ವೇಶ್ವರ ಹೆಗ್ಡೆ (ಅಂಕೋಲ) : ಮಾನ್ಯ ಮೀನುಗಾರಿಕೆ ಮತ್ತು ಬಂದರು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಅಂಕೋಲಾ ತಾಲ್ಲೂಕಿನಲ್ಲಿ ಬೇಲಿಕೇರಿ ಬಂದರಿನ ಹೂಳೆತ್ತುವ ಕೆಲಸ ಯಾವ ಹಂತದಲ್ಲಿದೆ ?